**ಮೂರನೇ ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ರವರ**
**ನ್ಯಾಯಾಲಯ, ಕನಕಪುರ**

**<u>ಸಿ.ಸಿ ನಂ. 764/2025</u>**

ದಿನಾಂಕಃ**. 26.03.2026** ರಂದು ಸಾಕ್ಷಿಗೆ ಮದ್ಯಾಹ್ನ **12.30** ಗಂಟೆಗೆ ಪ್ರಮಾಣ ವಚನ ಭೋದಿಸಲಾಯಿತು.

| ಚಾಸಾ-**1** | ಪ್ರಾಸಾ-**1** |
|---|---|
| ಹೆಸರು | - ಶಂಖರ್ ನಾಗ್ |
| ತಂದೆ ಹೆಸರು | - ವೆನಿಗನ್ |
| ವಯಸ್ಸು | - **65** |
| ಉದ್ಯೋಗ | - ವ್ಯಾಪಾರ |
| ವಿಳಾಸ | - ಜಯಲಕ್ಷ್ಮೀಪುರ |

**<u>ಮುಖ್ಯವಿಚಾರಣೆ : ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರಿಂದಃ-</u>**

ನ್ಯಾಯಾಲಯದ ಮುಂದಿರುವ ಆರೋಪಿ ನನಗೆ ಪರಿಚಯ ಇಲ್ಲ. ಮೃತ ಕವೀಣ ನನ್ನ ತಾಯಿ. ಅವರಿಗೆ ಹೇಗೆ ಅಪಘಾತವಾಗಿದೆ ಎಂದು ನನಗೆ ಗೊತ್ತಿಲ್ಲ. ಅಪಘಾತದ ಬಗ್ಗೆ ನಾನು ದೂರು ಕೊಡಲು ಠಾಣೆಗೆ ಹೋದಾಗ ಪೊಲೀಸರು ಬಿಳಿ ಹಾಳೆಗಳ ಮೇಲೆ ನನ್ನ ಹೆಬ್ಬೆಟ್ಟು ಗುರುತುಗಳನ್ನು ಪಡೆದುಕೊಂಡಿದ್ದರು.

ಸಾಕ್ಷಿ ಒಂದು ದೂರನ್ನು ನೋಡಿ ಅದರಲ್ಲಿರುವ ಒಂದು ಹೆಬ್ಬೆಟ್ಟಿನ ಗುರುತನ್ನು ನೋಡಿ ತನ್ನ ಹೆಬ್ಬೆಟ್ಟಿನ ಗುರುತು ಎಂದು ಗುರುತಿಸಿದ್ದು, ಸದರಿ **ದೂರನ್ನು** ನಿಪಿ-**1** ಎಂದು ಗುರುತಿಸಲಾಯಿತು.

ಸಾಕ್ಷಿ ಪಂಚನಾಮೆಯನ್ನು ನೋಡಿ ಅದರಲ್ಲಿರುವ ಒಂದು ಹೆಬ್ಬೆಟ್ಟಿನ ಗುರುತನ್ನು ನೋಡಿ ತನ್ನ ಹೆಬ್ಬೆಟ್ಟಿನ ಗುರುತು ಎಂದು ಗುರುತಿಸಿದ್ದು, **ಪಂಚನಾಮೆಯನ್ನು** ನಿಪಿ-**2** ಎಂದು ಗುರುತಿಸಲಾಯಿತು.

ಪೊಲೀಸರು ನನ್ನ ಸಮಕ್ಷಮ ಪಂಚನಾಮೆ ಮಾಡಿರುವುದಿಲ್ಲ ಮತ್ತು ಏನನ್ನು ವಶಪಡಿಸಿಕೊಂಡಿರುವುದಿಲ್ಲ.

ನಾನು ಪೊಲೀಸರಿಗೆ ಯಾವುದೇ ಹೇಳಿಕೆ ಕೊಟ್ಟಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲನ್ನು ಮಾಡಲು ಮಾನ್ಯ ಸರ್ಕಾರಿ ಅಭಿಯೋಜಕರು ರವರು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.)

**ಪಾಟೀ ಸವಾಲುಃ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-**

ದಿ. **01.01.2025** ರಂದು ಬೆಳಗ್ಗ **8.15** ಗಂಟೆ ಸಮಯದಲ್ಲಿ ಸಾತನೂರು ಪೋಲಿಸ್ ಠಾಣಾ ಸರಹದ್ದು ಜಕ್ಕೆಗೌಡನದೊಡ್ಡಿ ಸ್ಮಶಾನದ ಮುಂದೆ ಕನಕಪುರ ಸಾತನೂರು ರಸ್ತೆಯಲ್ಲಿ ಆರೋಪಿ ವಾಹನ ಸಂಖ್ಯೆಃ ಎಂ ಹೆಚ್**, 46 –** ಎ ಪಿ**. 4711** ಕಾರನ್ನು ಸಾತನೂರು ಕಡೆಯಿಂದ ಅತಿವೇಗವಾಗಿ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಕನಕಪುರದ ಕಡೆಯಿಂದ ರಸ್ತೆಯ ಎಡಭಾಗದಲ್ಲಿ ನಡೆದುಕೊಂಡು ಬರುತ್ತಿದ್ದ ನನ್ನ ತಾಯಿಗೆ ಡಿಕ್ಕಿ ಹೊಡೆಸಿ ಅಪಘಾತಪಡಿಸಿ ವಾಹನವನ್ನು ನಿಲ್ಲಿಸದೇ ಮತ್ತು ಹಾಗೆ ಹೋಗಿದ್ದು ಅಪಘಾತದಲ್ಲಿ ನನ್ನ ತಾಯಿ ಮೃತಪಟ್ಟಿದ್ದಾರೆ ಎಂದರೆ ಸರಿಯಲ್ಲ. ಈ ಬಗ್ಗೆ ನಾನು ನಿ.ಪಿ.**1** ರಂತೆ ದೂರು ಕೊಟ್ಟಿದ್ದೇನೆ ಎಂದರೆ ಸರಿಯಲ್ಲ.

ದಿ. **02.01.2025** ರಂದು ನನ್ನ ಹಾಗೂ ಚಾಸಾ-**3** ಮತ್ತು **4** ರವರ ಸಮಕ್ಷಮ ಪೊಲೀಸರು ನಿಪಿ- **2** ರ ಪ್ರಕಾರ ಮದ್ಯಾಹ್ನ **1.40** ಗಂಟೆಯಿಂದ **2.25** ಗಂಟೆವರೆಗೆ ಪಂಚನಾಮೆ ಮಾಡಿ **3** ನಂಬರ್ ಪೇಲಟ್ ಪೈಬರ್ ಚೂರುಗಳನ್ನು ವಶಪಡಿಸಿಕೊಂಡರು ಎಂದರೆ ಸರಿಯಲ್ಲ.

ಸಾಕ್ಷಿಗೆ ದಿಃ **10.01.2025** ರಂದು ಅವನು ಪೊಲೀಸರಿಗೆ ನೀಡಿದ ಎಂಬ ಮುಂದುವರೆದ ಹೇಳಿಕೆಯ ಭಾಗವಾದ "ನಾನು ನೋಡಲಾಗಿ .......ಗುರುತಿಸುತ್ತೇನೆ **",** ಓದಿ ಹೇಳಿದಾಗ ಅಲ್ಲಗಳೆದಿದ್ದರಿಂದ ಸದರಿ ಹೇಳಿಕೆ ಭಾಗವನ್ನು **ನಿಪಿ-3** ಎಂದು ಗುರುತಿಸಲಾಯಿತು.

ಆರೋಪಿಯೊಂದಿಗೆ ರಾಜಿ ಮಾಡಿಕೊಂಡಿರುವ ಕಾರಣ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ಶ್ರೀ. ವಕೀಲರಿಂದಃ**

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.

ಮರುವಿಚಾರಣೆ ಇಲ್ಲ.

(ಸಾಕ್ಷಿಯ ವಿಚಾರಣೆಯನ್ನು ನಾನು ತೆರೆದ ನ್ಯಾಯಾಲಯದಲ್ಲಿ ಮದ್ಯಾಹ್ನ **12.30** ಗಂಟೆಯವರೆಗೆ ಪಡೆದುಕೊಂಡಿರುತ್ತೇನೆ ಎಂದು ಧೃಢೀಕರಿಸುತ್ತೇನೆ)

ಓದಿ ಹೇಳಿ ಕೇಳಿ ಸರಿ ಇದೆ,

**ಮೂರನೇ ಅಪರ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್ ಸಿ., ಕನಕಪುರ.**